# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ.

ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.

Phone No: 08282–256166, mob: 7022254993 ಇ–ಮೇಲ್: regexamku@gmail.com, ವೆಬ್‌ಸೈಟ್: www.kuvempu.ac.in


**Re-Accredited by NAAC with 'A' Grade, Ranked 73rd Place in NIRF- 2019 and Secured 45th Place in SCIMAGO Institutional Rankings**

ಸಂಖ್ಯೆ: ಕುವಿ/ಪವಿ/ಪಿಸಿ/8705/2020–21 ದಿನಾಂಕ:18–02–2021

## ಪರೀಕ್ಷಾ ಪ್ರಕಟಣೆ

**ವಿಷಯ:** **ಮಾರ್ಚ್–2021**ರಲ್ಲಿ ನಡೆಯುಲಿರುವ **ಬಿ.ಇಡಿ,** ಪದವಿಯ ಚತುರ್ಥ ಸೆಮಿಸ್ಟರ್ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಕುರಿತು.

**ಉಲ್ಲೇಖ:** ಪರಿಷ್ಕೃತ ಅಧಿಸೂಚನೆ –3 ಸಂಖ್ಯೆ:ಕುವಿ:ಎಸಿ–3:ವೇಳಾಪಟ್ಟಿ:ಬಿ.ಇಡಿ:3462:2020–21. ದಿನಾಂಕ: 30–11–2020.

*****

ಉಲ್ಲೇಖಿತ ಪರಿಷ್ಕೃತ ಅಧಿಸೂಚನೆ –3ರ ಶೈಕ್ಷಣಿಕ ವೇಳಾಪಟ್ಟಿಯನುಸಾರ **ಬಿ.ಇಡಿ, ಪದವಿಯ** (2ವರ್ಷದ ಕೋರ್ಸ್) **ಚತುರ್ಥ** ಸೆಮಿಸ್ಟರ್‌ನ ಪರೀಕ್ಷಾ ಶುಲ್ಕ ಪಾವತಿಸಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ Onlineನಲ್ಲಿ ರಿಜಿಸ್ಟ್ರಾರ್(ಮೌಲ್ಯಮಾಪನ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1. | ದಂಡ ಶುಲ್ಕವಿಲ್ಲದೆ | 28–02–2021 |
| 2. | ರೂ. 100/– ದಂಡ ಶುಲ್ಕಸಹಿತ | ದಿನಾಂಕ: 01–03–2021 ರಿಂದ 03–03–2021 |
| 3. | ರೂ. 500/– ದಂಡ ಶುಲ್ಕಸಹಿತ | ದಿನಾಂಕ: 04–03–2021 ರಿಂದ 06–03–2021 |

| | | |
|---|---|---|
| 1. | ಚತುರ್ಥ ಸೆಮಿಸ್ಟರ್ ಪರೀಕ್ಷೆಗೆ | ರೂ. 200/– |
| 2. | ಅಂಕಪಟ್ಟಿ ಶುಲ್ಕ | ರೂ. 200/– |
| 3. | ನಾಲ್ಕನೇ ಸೆಮಿಸ್ಟರ್‌ನ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಶುಲ್ಕ | ರೂ. 780–00 |
| 4. | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಶುಲ್ಕ | ರೂ. 680–00 |

## *ವಿದ್ಯಾರ್ಥಿಗಳಿಗೆ ಸೂಚನೆ:*

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು **www.kuvempu.ac.in** ನಲ್ಲಿ student portal ಗೆ login ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card / Credit Card / Net Banking / Paytm wallet ಮೂಲಕ ನೇರವಾಗಿ ವಿದ್ಯಾರ್ಥಿಯು ವೈಯಕ್ತಿಕ ಅಥವಾ ಪೋಷಕರ ಬ್ಯಾಂಕ್ ಖಾತೆಯಿಂದ ಹಣಪಾವತಿಸಬಹುದಾಗಿದೆ ಅಥವಾ ಆನ್‌ಲೈನ್‌ನಲ್ಲಿ ಅಂಚೆಕಛೇರಿ ಚಲನ್ ಮುದ್ರಿಸಿಕೊಂಡು ಅಂಚೆಕಛೇರಿ ಮುಖಾಂತರ ಹಣ ಪಾವತಿಸಿ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

**ವಿಶೇಷ ಸೂಚನೆ:** ವಿದ್ಯಾರ್ಥಿಗಳು **Internet Browsing centre**ನ ಮಾಲೀಕರ ಬ್ಯಾಂಕ್‌ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.

ಅ. ವಿದ್ಯಾರ್ಥಿಗಳು ಸರ್ಕಾರದ ನಿಯಮಾನುಸಾರ ಶುಲ್ಕ ವಿನಾಯಿತಿಗೆ ಅರ್ಹರಿರುತ್ತಾರೆ. (Freshers only).

> **ವಿಶೇಷ ಸೂಚನೆ:** ಪರಿಶಿಷ್ಟಜಾತಿ:ಪರಿಶಿಷ್ಟಪಂಗಡ ಹಾಗೂ ಮೀಸಲಾತಿಗೆ ಒಳಪಡುವ ವರ್ಗಗಳ ಮರುಯತ್ನದ **(Repeaters)** ವಿದ್ಯಾರ್ಥಿಗಳಿಗೆ ಹಾಗೂ ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯ್ತಿ ಇರುವುದಿಲ್ಲ.

3. ಪರೀಕ್ಷೆಗೆ ವಿದ್ಯಾರ್ಥಿಗಳು ಪಾವತಿಸುವ ಶುಲ್ಕವನ್ನು ಯಾವುದೇ ಕಾರಣಕ್ಕಾಗಿ ಹಿಂದಿರುಗಿಸಲಾಗುವುದಿಲ್ಲ.
4. ಘನ ರಾಜ್ಯ ಸರ್ಕಾರದ ಆದೇಶ ಸಂಖ್ಯೆ: ಇಡಿ:197:ಯು.ಎನ್.ಇ.2020: ದಿ:14-08-2020ರನ್ವಯ, ಪರೀಕ್ಷಾ ಶುಲ್ಕ ಪಾವತಿಸಿ ಕೋವಿಡ್-19ರಿಂದಾಗಿ ವಿಶ್ವವಿದ್ಯಾಲಯದಿಂದ ಯಾವ ಸೆಮಿಸ್ಟರ್ ಪರೀಕ್ಷೆಯನ್ನು ನಡೆಸಲಾಗಿರುವುದಿಲ್ಲವೋ, ಅಂತಹ ಸೆಮಿಸ್ಟರ್ ಪರೀಕ್ಷೆಗೆ ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕದಲ್ಲಿ ಶೇಕಡ 50% ರಷ್ಟು ಮೊತ್ತವನ್ನು ಪ್ರಸ್ತುತ ನಡೆಸಲಾಗುವ ಸೆಮಿಸ್ಟರ್‌ನ ನಿಗದಿತ ಪರೀಕ್ಷಾ ಶುಲ್ಕಕ್ಕೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದು. ಹಾಗೂ ಬಾಕಿ ಉಳಿಯುವ ಶುಲ್ಕವನ್ನು ಮಾತ್ರ ವಿದ್ಯಾರ್ಥಿಗಳು ಪಾವತಿಸಬೇಕಾಗುತ್ತದೆ. (ಅಂಕಪಟ್ಟಿ ಶುಲ್ಕವನ್ನು ಹೊರತುಪಡಿಸಿ).

## ಪ್ರಾಚಾರ್ಯರಿಗೆ ಸೂಚನೆಗಳು

1. ಕುಲಸಚಿವ(ಆಡಳಿತ)/ಶೈಕ್ಷಣಿಕ ವಿಭಾಗದಿಂದ ಪ್ರವೇಶಾತಿ ಅನುಮೋದನೆಯಾಗದೇ ಹಾಗೂ ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ. ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚುವರಿಯಾಗಿ ಕಾಲೇಜಿಗೆ ಅಥವಾ ವ್ಯಾಸಂಗಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

2. ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದೆ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ ವಿದ್ಯಾರ್ಥಿಗಳು ಮುಂದಿನ ಸೆಮಿಸ್ಟರ್‌ಗೆ ಅರ್ಹತೆಯಿಲ್ಲದೆ ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ/ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ಕಾಲೇಜಿನ ಪ್ರಾಂಶುಪಾಲರೆ ನೇರ ಜವಾಬ್ದಾರರಾಗಿರುತ್ತಾರೆ.

3. ವಿದ್ಯಾರ್ಥಿಗಳು ಸರ್ಕಾರದ ನಿಯಮಾನುಸಾರ ಶುಲ್ಕ ವಿನಾಯಿತಿಗೆ ಅರ್ಹರಿರುತ್ತಾರೆ. (Freshers only).

4. ಮರುಯತ್ನದ (Repeaters) ಮತ್ತು ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯಿತಿ ಇರುವುದಿಲ್ಲ.

5. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯದ ಶುಲ್ಕ ಮತ್ತು ಸಂಭಾವನೆ ಖಾತೆ ಸಂಖ್ಯೆ- **54023036246** ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳಿಂದ ಪೂರ್ಣ ಪರೀಕ್ಷಾ ಶುಲ್ಕ ವಸೂಲು ಮಾಡಿ ಮಾಹಿತಿಯನ್ನು **(Hard Copy)**ಯಲ್ಲಿ ಪರೀಕ್ಷಾ ವಿಭಾಗದ ಲೆಕ್ಕಶಾಖೆಗೆ ಸಲ್ಲಿಸುವುದು.(ಹೆಚ್ಚಿನ ಮಾಹಿತಿಗೆ **6361529618** ಸಂಪರ್ಕಿಸಬಹುದು.)

6. ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು, **ದಿನಾಂಕ: 17-03-2021** ರೊಳಗೆ ಆನ್‌ಲೈನ್ ಮೂಲಕ ನಮೂದಿಸಿ ನಂತರ Freeze ಮಾಡಬೇಕು. ನಂತರದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. (**ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.**)

7. ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ ಯಾವುದೇ ತೊಂದರೆಗಳಿದ್ದಲ್ಲಿ ಅದನ್ನು ಕೂಡಲೇ ಬಗೆಹರಿಸಿಕೊಳ್ಳಬೇಕು. ತದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. (**ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.**)

8. ಆಂತರಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ತಮ್ಮ ಕಾಲೇಜಿನಲ್ಲಿಯೇ ಆರು ತಿಂಗಳಕಾಲ ಸಂರಕ್ಷಿಸಿಟ್ಟುಕೊಂಡು ನಂತರ ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡುವುದು.

9. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟುಹೋದಲ್ಲಿ ಯಾವುದೇ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು. (**ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.**)

ಕುಲಸಚಿವರು(ಪರೀಕ್ಷಾಂಗ)

**ಕುಲಸಚಿವ (ಮೌಲ್ಯಮಾಪನ)**
**ಕುವೆಂಪು ವಿಶ್ವವಿದ್ಯಾಲಯ**
**ಜ್ಞಾನಸಹ್ಯಾದ್ರಿ, ಶಂಕರಘಟ್ಟ–577 451**

ಗೆ,

ಪ್ರಾಂಶುಪಾಲರುಗಳಿಗೆ, ಶಿವಮೊಗ್ಗ/ಚಿಕ್ಕಮಗಳೂರು ಜಿಲ್ಲೆಗಳ ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಸಂಯೋಜಿತ ಬಿ.ಇಡಿ. ಕಾಲೇಜುಗಳು.

ಪ್ರತಿಗಳು:

1. ಆಪ್ತಶಾಖೆ, ಮಾನ್ಯ ಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
3. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
4. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5. ಅಧೀಕ್ಷಕರುಗಳು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ – ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
7. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
8. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9. ಎಲ್ಲಾ ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
10. ಕಛೇರಿ ಪ್ರತಿ.